RNU AIR DHARWAD

# JANUARY 6,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ವಿಜೇತ ಹಿರಿಯ ಸಾಹಿತಿ ನಾ.ಡಿಸೋಜಾ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಂತಾಪ ಸೂಚಿಸಿದ್ದಾರೆ. ಸಾಹಿತ್ಯ ಕೃಷಿಯ ಜೊತೆಯಲ್ಲಿ ಪರಿಸರ ರಕ್ಷಣೆ ಹೋರಾಟದಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದ ನಾ'ಡಿಸೋಜಾ ಅವರು, ಜನಪರ ಕಾಳಜಿಯ ಲೇಖಕರಾಗಿದ್ದರು ಎಂದು ಬಣ್ಣಿಸಿದ್ದು, ಅವರ ನಿಧನಕ್ಕೆ ಕಂಬನಿ ಮಿಡಿದಿದ್ದಾರೆ.  ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸೇರಿದಂತೆ ಗಣ್ಯರು ಸಂತಾಪ ಸೂಚಿಸಿದ್ದಾರೆ. ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ತಮ್ಮ ಎಕ್ಸ್ ಖಾತೆ ಮೂಲಕ ಸಂತಾಪ ಸೂಚಿಸಿ, ಕಂಬನಿ ಮಿಡಿದಿದ್ದು, ಕನ್ನಡ ಸಾಹಿತ್ಯದ ಎಲ್ಲ ಪ್ರಕಾರಗಳಲ್ಲಿಯೂ ಕೃತಿ ರಚಿಸುವಲ್ಲಿ ಖ್ಯಾತಿ ಪಡೆದಿದ್ದ, ಹಿರಿಯ ಸಾಹಿತಿ ಡಾಕ್ಟರ್ ನಾ ಡಿಸೋಜಾ ಅವರ ಅಗಲಿಕೆ ಸಾಹಿತ್ಯ ಕ್ಷೇತ್ರಕ್ಕೆ ತುಂಬಲಾರದ ನಷ್ಟ ಎಂದಿದ್ದಾರೆ. ಶಿವಮೊಗ್ಗ ಸಂಸದ ಬಿ.ವೈ ರಾಘವೇಂದ್ರ ಅವರು ತಮ್ಮ ಎಕ್ಸ್ ಖಾತೆಯ ಮೂಲಕ ಸಂತಾಪ ಸೂಚಿಸಿದ್ದು –ಕನ್ನಡ ನಾಡು ಕಂಡ ಅಪರೂಪದ ಸಾಹಿತಿ ನಾ.ಡಿಸೋಜಾ ನಿಧನದಿಂದ, ಕನ್ನಡ ಸಾಹಿತ್ಯ ಲೋಕ ಬಡವಾಗಿದೆ ಎಂದಿದ್ದಾರೆ.  ಇಂದು ಹುಟ್ಟೂರು ಸಾಗರದ ಸ್ವ ಗೃಹದಲ್ಲಿ ಪಾರ್ಥೀವ ಶರೀರದ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ.

<><><>

ಧಾರವಾಡ ಹುಬ್ಬಳ್ಳಿ ಮಧ್ಯೆ, ಲೈಟ್ ರೇಲ್ ಟ್ರಾನ್ಸ್‌ಪೋರ್ಟ್ ಸಿಸ್ಟಮ್, 'ಎಲ್.ಆರ್.ಟಿ.' ಬಿ.ಆರ್.ಟಿ.ಎಸ್. ಲೇನ್‌ನಲ್ಲಿ, ಜಾರಿಗೆ ತರಲು, ಚಿಂತನೆ ನಡೆದಿದೆ ಎಂದು, ಜಿಲ್ಲಾ ಉಸ್ತುವಾರಿ ಸಚಿವ ಸಂತೋ ’ ಲಾಡ್ ತಿಳಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಸಚಿವರು ಮಾತನಾಡಿ..

<><><>

ಸಚಿವ ಸಂತೋಷ ಲಾಡ್ ಧ್ವನಿ 36 ಸೆಕೆಂದುಗಳು

<><><>

ಅರಣ್ಯಕ್ಕೆ ಕಳೆ ಸಸ್ಯಗಳಿಂದ ಉಂಟಾಗಬಹುದಾದ ಅನಾಹುತವನ್ನು ತಪ್ಪಿಸುವ ನಿಟ್ಟಿನಲ್ಲಿ, ಚಾಮರಾಜನಗರ ಜಿಲ್ಲೆಯ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ, ಬಿಳಿಗಿರಿ ರಂಗನಾಥಸ್ವಾಮಿ ಹುಲಿ ಸಂರಕ್ಷಿತ ಪ್ರದೇಶ ಹಾಗೂ ಮಲೈಮಹಾದೇಶ್ವರ ವನ್ಯಜೀವಿ ವಿಭಾಗದ ಅರಣ್ಯ ಇಲಾಖೆ ಅಧಿಕಾರಿಗಳು, ನರೇಗಾ, ಸ್ವಯಂಸೇವಾ ಸಂಸ್ಥೆಗಳ ಸಹಾಯದಿಂದ ಕಳೆ ಸಸ್ಯಗಳ ನಿರ್ಮೂಲನೆಗೆ ಮುಂದಾಗಿದ್ದಾರೆ. ಯುವಕ, ಯುವತಿಯರಿಗೆ ಉದ್ಯೋಗ ದೊರಕಿಸಿಕೊಡುವ ನಿಟ್ಟಿನಲ್ಲಿ ಈ ಕಳೆ

ಸಸ್ಯಗಳಿಂದ ಅಲಂಕಾರಿಕ ವಸ್ತುಗಳನ್ನು ತಯಾರಿಸುವ ಬಗ್ಗೆ ಚಿಂತನೆ ನಡೆಸಲಾಗಿದೆ. ರಾಜ್ಯದಲ್ಲಿ ಅರಣ್ಯ ಪ್ರದೇಶದ ಒಟ್ಟು ವಿಸ್ತೀರ್ಣ ಹೆಚ್ಚಾಗಿದೆ, ಆದರೆ ಕಳೆದ ಎರಡು ವರ್ಷಗಳಲ್ಲಿ ಕಾಡನ್ನು ಅಪೋಶನ ತೆಗೆದುಕೊಂಡ ಆಕ್ರಮಣಕಾರಿ, ಕಳೆಸಸ್ಯಗಳ ವಿಸ್ತೀರ್ಣ ದುಪ್ಪಟ್ಟಾಗಿದೆ ಎಂದು ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ 'ಭಾರತೀಯ ಅರಣ್ಯ ಸ್ಥಿತಿಗತಿ ವರದಿ–2023' ರಲ್ಲಿ ಮಾಹಿತಿ ನೀಡಲಾಗಿದೆ.

<><><>

ದಕ್ಷಿಣ ಭಾರತದ ಕುಂಭಮೇಳ ಎಂದೇ ಪ್ರಸಿದ್ಧವಾಗಿರುವ, ಕೊಪ್ಪಳ ನಗರದ ಗವಿಸಿದ್ದೇಶ್ವರ ದೇಗುಲದ ಜಾತ್ರಾಮಹೋತ್ಸವದ ಅಂಗವಾಗಿ, 15 ನೇ ತಾರೀಖಿನಂದು ಮಹಾರಥೋತ್ಸವ ಜರುಗಲಿದೆ. ಹಿಂದುಸ್ತಾನಿ ಗಾಯಕರಾದ ಪದ್ಮಶ್ರೀ ಎಂ. ವೆಂಕಟೇಶ ಕುಮಾರ ಮಹಾರಥಕ್ಕೆ ಚಾಲನೆ ನೀಡಲಿದ್ದಾರೆ, ತುಮಕೂರಿನ ಸಿದ್ಧಗಂಗಾ ಮಠದ ಸಿದ್ಧರಾಮ ಮಹಾಸ್ವಾಮಿಗಳು ಸಾನಿಧ್ಯ ವಹಿಸಲಿದ್ದಾರೆ. ಕ್ರೀಡಾ ಇಲಾಖೆಯಿಂದ ಕುಸ್ತಿ, ಗಾಳಿಪಟ ಉತ್ಸವ, ಚಕ್ಕಡಿ ಎಳೆಯುವ ಸ್ಪರ್ಧೆ ಹಾಗೂ ಎತ್ತು ಬಂಡಿ ಶೃಂಗಾರ ಮಾಡಿದ ಮೆರವಣಿಗೆ ಸ್ಪರ್ಧೆ ನಡೆಯಲಿದೆ ಎಂದು ಶರಣಬಸಪ್ಪ ಬಿಳಿಎಲೆ ಅವರು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

<><><>

ದಕ್ಷಿಣ ಕನ್ನಡ ಜಿಲ್ಲೆಯ ಪುಣ್ಯ ಕ್ಷೇತ್ರಗಳಲ್ಲಿ ಒಂದಾದ ಕುಕ್ಕೆ ಶ್ರೀ ಸುಬ್ರಹ್ಮಣ್ಯ ದೇವಸ್ಥಾನದಲ್ಲಿ ಕಿರು ‘ಷ್ಠಿ ಮಹೋತ್ಸವ ವಿಜೃಂಭಣೆಯಿಂದ ಜರುಗಿತು. ಸಾವಿರಾರು ಭಕ್ತರು ಮಹೋತ್ಸವದಲ್ಲಿ ಪಾಲ್ಗೊಂಡರು. ಧಾರ್ಮಿಕ ದತ್ತಿ ಇಲಾಖೆಯ ಶೈವಾಗಮ, ಪಂಡಿತರಾಜಗೋಪಾಲ್ ಅವರ ಮಾರ್ಗದರ್ಶನದಲ್ಲಿ, ಕುಕ್ಕೆ ಶ್ರೀ ಸುಬ್ರಹ್ಮಣ್ಯ ದೇವಸ್ಥಾನದಲ್ಲಿ ಮಧ್ಯಾಹ್ನ ಮಹಾಪೂಜೆ, ಬಳಿಕ ದೇವಳದ ಹೊರಾಂಗಣದ ಸುತ್ತಲೂ  ಬಾಳೆ ಎಲೆಗಳ ಮೇಲೆ ದೇವರ ನೈವೇದ್ಯಗಳನ್ನು ಬಡಿಸಿ, ಗೋವುಗಳಿಗೆ ಸಮರ್ಪಿಸಲಾಯಿತು.

<><><>

ಉಪರಾ ್ಟ್ರಪತಿ ಜಗದೀಪ್ ಧನ್‌ಕರ್ ಅವರು ನಾಳೆ, ದಕ್ಷಿಣ ಕನ್ನಡ ಜಿಲ್ಲೆಗೆ ಆಗಮಿಸಲಿದ್ದು, ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಶ್ರೀ ಕ್ಷೇತ್ರ ಧರ್ಮಸ್ಥಳದಲ್ಲಿ ಭಕ್ತಾದಿಗಳಿಗಾಗಿ ನಿರ್ಮಿಸಿರುವ 'ಶ್ರೀ ಸಾನಿಧ್ಯ' ಸಂಕೀರ್ಣವನ್ನು ಉದ್ಘಾಟಿಸಲಿದ್ದಾರೆ ಬಳಿಕ 2024–25 ನೇ ಸಾಲಿನ ಜ್ಞಾನದೀಪ ಕಾರ್ಯಕ್ರಮಗಳಿಗೆ ಚಾಲನೆ ನೀಡಲಿದ್ದಾರೆ.

<><><>

ಧಾರವಾಡ ರಂಗಾಯಣ, ಪಂಡಿತ ಬಸವರಾಜ ರಾಜಗುರು ಬಯಲು ರಂಗಮಂದಿರದಲ್ಲಿ ಆಯೋಜಿಸಿರುವ, ರಂಗಾಯಣ ನಾಟಕೋತ್ಸವದಲ್ಲಿ, ಮೂರನೇ ದಿನವಾದ ಇಂದು, ಸಾಯಂಕಾಲ 6 ಗಂಟೆಗೆ, ಪಂಪನ ಆದಿಪುರಾಣದ ಆಯ್ದ ಕಥಾ ಭಾಗದ 'ಬಾಹುಬಲಿ ವಿಜಯ' ನಾಟಕ ಪ್ರದರ್ಶನಗೊಳ್ಳಲಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>